# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ Mobile App ನ್ನು ಅನುಷ್ಠಾನಗೊಳಿಸುವ ಕುರಿತು.

******

**ಪ್ರಸ್ತಾವನೆ:**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ Mobile App ನ್ನು ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿದೆ. ಅದರಂತೆ ಗಾಂಧಿ ಸಾಕ್ಷಿ ಕಾಯಕ Mobile App ನ್ನು ಪ್ರಾಥಮಿಕ ಹಂತದಲ್ಲಿ ತುಮಕೂರು ಜಿಲ್ಲೆಯಲ್ಲಿ ಅನುಷ್ಠಾನಗೊಳಿಸಲಾಗಿತ್ತು.

ಪ್ರಸ್ತುತ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಕಾಮಗಾರಿಗಳಿಗೆ ಸಂಬಂಧಿಸಿದ ಪ್ರಾರಂಭಿಕ ಹಂತದ ಫೋಟೋ, ಪರಿಶೀಲನಾ ಹಂತದ ಫೋಟೋ, ಅಂತಿಮ ಫೋಟೋಗಳನ್ನು ಹಾಗೂ GPS co-ordinates ಗಳನ್ನು manually ಮಾಡಲಾಗುತ್ತಿದ್ದು, ಈವರೆವಿಗೂ Geo-stgamping ನ್ನು ಮಾಡಲಾಗುತ್ತಿರುವುದಿಲ್ಲ. Manually update ಮಾಡಲಾದ ಕಾಮಗಾರಿಯ ಫೋಟೋಗಳನ್ನು ಗಮನಿಸಿದಾಗ ಫೋಟೋಗಳಲ್ಲಿ ಸಾಕಷ್ಟು ಲೋಪಗಳು, ಪುನರಾವರ್ತನೆಗೊಂಡ ಫೋಟೋಗಳು ಇರುವುದು ಕಂಡುಬಂದಿರುತ್ತದೆ. GPS co-ordinates ಗಳಲ್ಲೂ ಸಾಕಷ್ಟು ಲೋಪಗಳನ್ನು ಗಮನಿಸಲಾಗಿದೆ.

ಈ ಎಲ್ಲಾ ಅಂಶಗಳನ್ನು ಗಮನಿಸಿ, ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ Mobile Application (GSK App) ನ್ನು ಅಭಿವೃದ್ಧಿಪಡಿಸಲಾಗಿದ್ದು, ಸದರಿ Application ನಲ್ಲಿ Geo stamping ಗೆ ಹೆಚ್ಚು ಪ್ರಾಮುಖ್ಯತೆಯನ್ನು ನೀಡಿದ್ದು ಕಾಮಗಾರಿಯ ಫೋಟೋಗಳನ್ನು ತೆಗೆದು upload ಮಾಡಿದಾಗ ಕಾಮಗಾರಿ ಸ್ಥಳದ GPS co-ordinates ಗಳು Automatic ಆಗಿ update ಆಗುವುದು.

ಇದರಿಂದಾಗಿ ಕಾಮಗಾರಿಗಳು ಪುನರಾವರ್ತನೆಯಾಗುವುದನ್ನು (duplication of works) ತಡೆಯಬಹುದು. ಸದರಿ ಪ್ರಕ್ರಿಯೆಯು ಲೋಪರಹಿತ ಮತ್ತು ಯಾವುದೇ ಅವ್ಯವಹಾರಕ್ಕೆ ಅವಕಾಶವಿಲ್ಲದಂತಹ ಪದ್ಧತಿಯನ್ನು ಜಾರಿಗೆ ತರುವ ದಿಸೆಯಲ್ಲಿ ಅನುಷ್ಠಾನಗೊಳಿಸಲಾಗಿದೆ. ಆದ್ದರಿಂದ ಇನ್ನು ಮುಂದೆ ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಫೋಟೋ ಅಳವಡಿಸುವುದು ಹಾಗೂ Geo-stamping ನ್ನು GSK App ನ ಮುಖಾಂತರವೇ ಮಾಡುವುದು ಕಡ್ಡಾಯಗೊಳಿಸಿದೆ.

ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದ Mobile App ನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್ ಹಾಗೂ ಇತರೆ ಅಧೀನ ಇಲಾಖೆಗಳಾದ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ನಿಗಮ, ಕರ್ನಾಟಕ ರೂರಲ್ ಇನ್ ಫ್ರಾಸ್ಟ್ರಕ್ಚರ್ ಡೆವಲಪ್ ಮೆಂಟ್ ಲಿಮಿಟೆಡ್, ನಿರ್ಮಿತಿ ಕೇಂದ್ರಗಳಲ್ಲಿ ದಿನಾಂಕ:25.07.2019 ರಿಂದ ಕಡ್ಡಾಯಗೊಳಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಆದೇಶ.

.....2

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/17/ಗ.ಕೋಶ/2017, ಬೆಂಗಳೂರು, ದಿನಾಂಕ:15.07.2019.**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಮೇಲಿನ ಎಲ್ಲಾ ಅಂಶಗಳನ್ನು ಪರಿಗಣಿಸಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ NIC ಮುಖಾಂತರ ಅಭಿವೃದ್ಧಿಪಡಿಸಿರುವ GSK App ನ್ನು ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧೀನ ಇಲಾಖೆ/ಸಂಸ್ಥೆಗಳಾದ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ನಿಗಮ, ಕರ್ನಾಟಕ ರೂರಲ್ ಇನ್ ಫ್ರಾಸ್ಟ್ರಕ್ಚರ್ ಡೆವಲಪ್ ಮೆಂಟ್ ಲಿಮಿಟೆಡ್ ಗಳಲ್ಲಿ ದಿನಾಂಕ:25.07.2019 ರಿಂದ ಅನುಷ್ಠಾನಗೊಳಿಸಲು ಕಡ್ಡಾಯಗೊಳಿಸಿದೆ. ಕಾಮಗಾರಿಗಳ ಪ್ರಾರಂಭಿಕ ಹಂತದ ಫೋಟೋ, ಪರಿಶೀಲನಾ ಹಂತದ ಫೋಟೋ, ಅಂತಿಮ ಫೋಟೋಗಳನ್ನು ಅಳವಡಿಸುವುದು ಹಾಗೂ Geo-stamping ನ್ನು GSK App ನ ಮುಖಾಂತರವೇ ಮಾಡುವುದು ಕಡ್ಡಾಯಗೊಳಿಸಿದೆ. ಈ ಬಗ್ಗೆ ಎಲ್ಲಾ ಅನುಷ್ಠಾನಾಧಿಕಾರಿಗಳು ಸೂಕ್ತ ಕ್ರಮವಹಿಸಿ ತಂತ್ರಾಂಶಗಳ ಕ್ರಮಬದ್ಧ ಮತ್ತು ಶಿಸ್ತುಬದ್ಧ ನಿರ್ವಹಣೆಗೆ ಅಗತ್ಯ ಕ್ರಮಕೈಗೊಳ್ಳುವಂತೆ ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ವಿ. ನಾಗರಾಜ)
ನಿರ್ದೇಶಕರು(ಇ-ಆಡಳಿತ) ಹಾಗೂ
ಪ/ನಿ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಬೆಂಗಳೂರು.
2. ಆಯುಕ್ತರು, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕೆ.ಆರ್.ಆರ್.ಡಿ.ಎ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಐ.ಡಿ.ಎಲ್, ಬೆಂಗಳೂರು.
7. ಎಲ್ಲಾ ನಿರ್ದೇಶಕರುಗಳು, ಗ್ರಾಅಪ ಇಲಾಖೆ, ಬೆಂಗಳೂರು.
8. ಹಿರಿಯ ತಾಂತ್ರಿಕ ನಿರ್ದೇಶಕರು, ಎನ್.ಐ.ಸಿ, ಬೆಂಗಳೂರು.
9. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
10. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್ ಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
11. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
12. ಪ್ರಧಾನ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಅಪ ಇಲಾಖೆ, ಬೆಂಗಳೂರು.
13. ಮುಖ್ಯ ಸಂಪಾದಕರು ಹಾಗೂ ಸಾರ್ವಜನಿಕ ಸಂಪರ್ಕಾಧಿಕಾರಿ, ಕರ್ನಾಟಕ ವಿಕಾಸ, ಗ್ರಾಅಪ ಇಲಾಖೆ, ಬೆಂಗಳೂರು.